**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ ಮಂಡಳಿ, ಬೆಂಗಳೂರು.**

**ಸಾರ್ವತ್ರಿಕ ಪರೀಕ್ಷೆ – ಮಾರ್ಚ್ 2016**

**ಹತ್ತನೆಯ ತರಗತಿ – ಪ್ರಥಮ ಭಾಷೆ ಕನ್ನಡ**

**ಒಟ್ಟು ಪ್ರಶ್ನೆಗಳು – 49 ಗರಿಷ್ಠ ಅಂಕಗಳು – 100**

## ಭಾಗ – 'ಎ'

**ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿರಿ. 9*1=9**

1. ಅಮೆರಿಕದ ವಿದ್ಯಾರ್ಥಿಗಳನ್ನು ರಂಜಿಸಿದ ಕನ್ನಡ ಸಾಹಿತ್ಯ ಭಾಗಗಳು ಯಾವುವು?
2. ಧರ್ಮಗಳು ಹಾಕಿಕೊಟ್ಟಿರುವ ರತ್ನಪಾಠ ಏನು?
3. ವಿಶ್ವೇಶ್ವರಯ್ಯ ಅವರ ಹುಟ್ಟು ಹಬ್ಬದ ನೆನಪಿಗಾಗಿ ಯಾವ ದಿನಾಚರಣೆಯನ್ನು ಆಚರಿಸಲಾಗುತ್ತದೆ?
4. ದೇವನೂರರ ಪ್ರಕಾರ 'ನನ್ನ ದೇವರು' ಯಾರು?
5. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು?
6. 'ಘಟ ಸಂಭೂತ' ಎಂದರೆ ಯಾರು?
7. ಹಲಗಲಿಯ ಬೇಡರಲ್ಲಿ ಪ್ರಮುಖರಾದ ನಾಲ್ವರನ್ನು ಹೆಸರಿಸಿ.
8. ಜೇಡರ ದಾಸಿಮಯ್ಯ ಅವರ ಪ್ರಕಾರ ನಿಷ್ಠೆಯುಳ್ಳ ಭಕ್ತನಿಗೆ ನಟ್ಟಡವಿಯೂ ಸಹ ಏನೆನಿಸುತ್ತದೆ?
9. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ. 10*2=20**

10. ಸಹಾನುಭೂತಿಗಾಗಿ ಇರಬೇಕಾದ ಎರಡು ಕಣ್ಣುಗಳಾವುವು ಎಂದು ವಿ. ಕೃ. ಗೋಕಾಕ್ ಹೇಳಿದ್ದಾರೆ?
11. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯನವರು ಸಲ್ಲಿಸಿದ ಸೇವೆ ಯಾವುದು?
12. ಪರಮಹಂಸರ ವೈಶಿಷ್ಟ್ಯ ಎಂಥದ್ದು?
13. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು?
14. ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು?
15. ಮಾತಿನ ಮಹತ್ತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ?
16. ಸಮಾಜ ಸುಧಾರಣೆ ಯಾವಾಗ ಸಾಧ್ಯ ಎಂದು ಎಚ್. ನರಸಿಂಹಯ್ಯ ಅವರು ವಿವರಿಸಿದ್ದಾರೆ?
17. ಭರತ ಚಕ್ರವರ್ತಿಗೆ ತನ್ನ ಹೆಸರನ್ನು ವೃಷಭಾಚಲದಲ್ಲಿ ಬರೆಸಲು ಏಕೆ ಸಾಧ್ಯವಾಗಲಿಲ್ಲ?
18. 'ಅನ್ ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿ ಅವರ ಮೇಲೆ ಯಾವ ಪರಿಣಾಮ ಬೀರಿತು?
19. 'ಉಪ್ಪು' ಎಂಬ ಅರ್ಥ ಬರಲು ಹೇಳಿದ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 4*3=12**

20. "ಮಿಕ್ಕ ಹೊನ್ನಿಂಗೆ ಜೀರ್ಣಜಿನಾಲಯಂಗಳಿಗೆ ಸೊದೆಯನಿಕ್ಕುವುದು"
21. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ"
22. "ಗಡಿಯೂ ಇಲ್ಲ ಆಚೆ ಈಚೆಯೂ ಇಲ್ಲ"
23. "ಜಾನಕಿಯ ಮಗನಿದಕೆ ಬೆದರುವನೆ"

**ಈ ಸಾಹಿತಿಗಳ / ಕವಿಗಳ ಕಾಲ, ಸ್ಥಳ, ಕೃತಿ ಮತ್ತು ಪ್ರಶಸ್ತಿ / ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2*3–6**

24. ಗೊರೂರು ರಾಮಸ್ವಾಮಿ ಅಯ್ಯಂಗಾರ್
25. ಆದಿಕವಿ ಪಂಪ

**ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ. 1*4=4**

26. ಯುಗ–ಯುಗಗಳ ________________________

________________________

________________________

________________________

ಹಕ್ಕಿ ಹಾರುತಿದೆ ನೋಡಿದಿರಾ?

ಅಥವಾ

ನೀಲ ಮೇಘ ಮಂಡಲ ________________

________________________

________________________

________________________

ಹಕ್ಕಿ ಹಾರುತಿದೆ ನೋಡಿದಿರಾ?

**ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ. 1*4=4**

27. ಕಲುಷಿತವಾದೀ ನದೀಜಲಗಳಿಗೆ
ಮುಂಗಾರಿನ ಮಳೆಯಾಗೋಣ
ಬರಡಾಗಿರುವೀ ಕಾಡುಮೇಡುಗಳ
ವಸಂತವಾಗುತ ಮುಟ್ಟೋಣ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು / ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2*4=8**

28. ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಅಥವಾ**

'ನಂಬಿ ಕೆಟ್ಟವರಿಲ್ಲ' ಎಂಬ ಮಾತು ಶಬರಿಯ ಪಾಲಿಗೆ ಹೇಗೆ ನಿಜವಾಗಿದೆ? ವಿವರಿಸಿ.

29. ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನಸ್ಥಿತಿಯನ್ನು ಕುರಿತು ಬರೆಯಿರಿ.

**ಅಥವಾ**

ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು?

**ಈ ಕೆಳಗಿನ ಗದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ. 1*4=4 (2+2)**

30. ಒಂದು ಭಾಷೆ ಸತ್ವಪೂರ್ಣವಾಗಬೇಕಾದರೆ ಅದನ್ನಾಡುವ ಜನ ಅಭಿಮಾನಧನರೂ, ಬುದ್ಧಿಶಾಲಿಗಳೂ, ಪ್ರಯೋಗಶೀಲರೂ ಆಗಿರಬೇಕು. ನಾಲ್ಕೈದು ಶತಮಾನಗಳ ಹಿಂದೆ ಆಂಗ್ಲ ಭಾಷೆ ಯೂರೋಪಿನ ಸಾಮಾನ್ಯ ಭಾಷೆಗಳಲ್ಲಿ ಒಂದಾಗಿತ್ತು. ಆಂಗ್ಲ ಜನತೆ ಸಾಹಸಜೀವಿಯಾಯಿತು, ಬುದ್ಧಿಶಾಲಿಯಾಯಿತು, ಸೂರ್ಯನು ಎಂದೂ ಮುಳುಗ ನ್ನೆನ್ನುವಂತಹ ವಿಸ್ತಾರವಾದ ಸಾಮ್ರಾಜ್ಯವನ್ನು ಸ್ಥಾಪಿಸಿತು. ದೇಶ ವಿದೇಶಗಳ ಭಾಷೆ ಹಾಗೂ ಸಾಹಿತ್ಯ ಸಂಸ್ಕೃತಿಯನ್ನು ಆಂಗ್ಲ ಪಂಡಿತರು ಮುಕ್ತ ಮನಸ್ಸಿನಿಂದ ಅಭ್ಯಸಿಸಿದರು. ತನ್ಮೂಲಕ ತಮ್ಮ ಭಾಷೆ ಮತ್ತು ಸಾಹಿತ್ಯವನ್ನು ಹಿಗ್ಗಿಸಿದರು, ಅರಳಿಸಿದರು. ಎಲ್ಲಕ್ಕೂ ಮೇಲಾಗಿ ಮಹಾಮೇಧಾವಿಗಳು ತಮ್ಮ ಆಸೆ, ಆಕಾಂಕ್ಷೆ, ವಿಚಾರ ಮುಂತಾದುವನ್ನು ಆ ಭಾಷೆಯ ಮುಖಾಂತರವಾಗಿಯೇ ಹೇಳಬೇಕೆಂಬ ಉಜ್ವಲ ಅಭಿಮಾನವುಳ್ಳವರಾಗಿದ್ದರು. ಆಂಗ್ಲ ವಿಜ್ಞಾನಿಗಳು, ರಾಜ ಕಾರಣಿಗಳು, ಅರ್ಥಶಾಸ್ತ್ರಜ್ಞರು ಹೀಗೆ ಎಲ್ಲರೂ ತಮ್ಮ ಭಾಷೆಯನ್ನೇ ಬಳಸಿದುದರ ಪರಿಣಾಮವಾಗಿ ಆ ಭಾಷೆ ಬೆಳೆದು ಇಂದು

ಪ್ರಪಂಚದ ದೊಡ್ಡ ಭಾಷೆಗಳಲ್ಲಿ ಒಂದಾಗಿದೆ. ಇದಕ್ಕೆಲ್ಲ ಆಂಗ್ಲ ಜನರ ಸಂಕಲ್ಪ ಕೃಷಿ ಕಾರಣವೆಂದು ಬೇರೆ ಹೇಳಬೇಕಿಲ್ಲ.

**ಪ್ರಶ್ನೆಗಳು :-**

1. ಭಾಷೆ ಸತ್ವಪೂರ್ಣವಾಗಿ ವಿಕಾಸಗೊಳ್ಳುವುದು ಯಾವಾಗ?
2. ಆಂಗ್ಲಭಾಷೆ ವಿಶ್ವವ್ಯಾಪಿಯಾಗಲು ಕಾರಣವೇನು?

## ಭಾಗ – 'ಬಿ'

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಇವುಗಳಲ್ಲಿ ಹೆಚ್ಚು ಸೂಕ್ತವಾದದ್ದನ್ನು ಆರಿಸಿ, ಉತ್ತರಕ್ಕಾಗಿಯೇ ಕೊಟ್ಟಿರುವ ಜಾಗದಲ್ಲಿ ಕ್ರಮಾಕ್ಷರದೊಂದಿಗೆ ಬರೆಯಿರಿ.** **10*1=10**

31. 'ಬೆಂಬತ್ತು' ಪದವು ಈ ಸಂಧಿಗೆ ಉದಾಹರಣೆಯಾಗಿದೆ;
   (ಎ) ಆಗಮ ಸಂಧಿ (ಬಿ) ಆದೇಶ ಸಂಧಿ
   (ಸಿ) ಲೋಪ ಸಂಧಿ (ಡಿ) ಜಶ್ತ್ವ ಸಂಧಿ
32. ಕ್ರಿಯಾಪದದ ಸ್ಥಾನದಲ್ಲಿದ್ದು ವಾಕ್ಯದ ಅರ್ಥವನ್ನು ಪೂರ್ಣಗೊಳಿಸುವ ಅವ್ಯಯ;
   (ಎ) ಸಾಮಾನ್ಯಾವ್ಯಯ (ಬಿ) ಅನುಕರಣಾವ್ಯಯ
   (ಸಿ) ಕ್ರಿಯಾರ್ಥಕಾವ್ಯಯ (ಡಿ) ಸಂಬಂಧಾರ್ಥಕಾವ್ಯಯ
33. 'ಕಾರವಾರದಲ್ಲಿ ಮಲೇರಿಯಾ ವ್ಯಾಪಕವಾಗಿ ಹಬ್ಬಿತ್ತು' ಈ ವಾಕ್ಯವು;
   (ಎ) ಸಂಯೋಜಿತ ವಾಕ್ಯ (ಬಿ) ಪ್ರಶ್ನಾರ್ಥಕ ವಾಕ್ಯ
   (ಸಿ) ಮಿಶ್ರ ವಾಕ್ಯ (ಡಿ) ಸಾಮಾನ್ಯ ವಾಕ್ಯ
34. ಸರ್ವನಾಮ ಪದಕ್ಕೆ ಉದಾಹರಣೆಯಿದು;
   (ಎ) ವ್ಯಾಪಾರಿ (ಬಿ) ನದಿ
   (ಸಿ) ಯಾರು (ಡಿ) ರಮೇಶ
35. 'ಕೌರವನಿಂದ' ಈ ಪದದಲ್ಲಿರುವ ವಿಭಕ್ತಿ;
   (ಎ) ಪ್ರಥಮಾ (ಬಿ) ದ್ವಿತೀಯಾ
   (ಸಿ) ತೃತೀಯಾ (ಡಿ) ಚತುರ್ಥೀ
36. ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಈ ಚಿಹ್ನೆಯನ್ನು ಬಳಸಲಾಗುವುದು;
   (ಎ) ಅರ್ಧವಿರಾಮ ಚಿಹ್ನೆ (ಬಿ) ಅಲ್ಪವಿರಾಮ ಚಿಹ್ನೆ
   (ಸಿ) ಉದ್ಧರಣ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ
37. ಕ್ರಿಯಾ ಸಮಾಸಕ್ಕೆ ಉದಾಹರಣೆಯಾದ ಪದವಿದು;
   (ಎ) ಕಡೆಗಣ್ಣು (ಬಿ) ಮೆಲ್ಲಾತು
   (ಸಿ) ತಲೆನೋವು (ಡಿ) ಸಾಕ್ಷಿಮಾಡಿ
38. ಪೋರ್ಚುಗೀಸ್ ಭಾಷೆಯಿಂದ ಕನ್ನಡಕ್ಕೆ ಬಂದಿರುವ ಪದ;
   (ಎ) ಸಾಬೂನು (ಬಿ) ಜಮೀನು
   (ಸಿ) ತಾಲ್ಲೂಕು (ಡಿ) ಸಲಾಮು
39. 'ಓದು' ಪದದ ಸಂಭಾವನಾರ್ಥಕ ರೂಪವಿದು;
   (ಎ) ಓದರು (ಬಿ) ಓದಿಯಾರು
   (ಸಿ) ಓದಲಿ (ಡಿ) ಓದೋಣ
40. ನಿರೋಷ್ಠ್ಯ, ತಾಲವ್ಯ, ಏಕಾಕ್ಷರ, ಮುರಜಬಂಧ ಇತ್ಯಾದಿ ಪ್ರಕಾರಗಳನ್ನೊಳಗೊಂಡ ಶಬ್ದಾಲಂಕಾರವಿದು;
   (ಎ) ವೃತ್ತ್ಯನುಪ್ರಾಸ (ಬಿ) ಛೇಕಾನುಪ್ರಾಸ
   (ಸಿ) ಯಮಕ (ಡಿ) ಚಿತ್ರ ಕವಿತ್ವ

**ಈ ಕೆಳಗಿನ ಮೊದಲೆರಡು ಪದಗಳಿಗೆ ಇರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4*1=4**

41. ನಂಬಿಕೆ : ಕೃದಂತ ಭಾವನಾಮ : : ನಿನಗಾಗಿ : ______
42. ಹೌದ್ಹೌದು : ದ್ವಿರುಕ್ತಿ : : ಹಾಲ್ಜೇನು : ________
43. ಪ್ರಸಾದ : ಹಸಾದ : : ವ್ಯಾಪಾರಿ : ________
44. ಮುಕ್ತಕಂಠ : ತೆರೆದ ಮನಸ್ಸು : : ಸುಸಂಗತ : _____

**ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ.** **1*3=3**

45.

**ಎನಗಂ ಪಾಂಡುಗಮಿಲ್ಲ ಭೇದಮಿಳೆಯಂ ಪಚ್ಚಾಳ್ವಮಾ ಪಾಂಡುನಂ**

**ಅಥವಾ**

**ಏನು ಹೇಳೈ ಕರ್ಣ ಚಿತ್ತ**
**ಗ್ಲಾನಿ ಯಾವುದು ಮನಕೆ ಕುಂತೀ**
**ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ**

**ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಗುರುತಿಸಿ, ಲಕ್ಷಣ ಬರೆದು ಸಮನ್ವಯಿಸಿ.** **1*3=3**

46. "ನೀಚರಿಗೆ ಮಾಡಿದ ಉಪಕಾರವು ಹಾವಿಗೆ ಹಾಲೆರೆದಂತೆ"

**ಅಥವಾ**

"ಮಾರಿಗೌತಣವಾಯ್ತು ನಾಳಿನ ಭಾರತವು"

## ಭಾಗ – 'ಸಿ'

47. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ ಬರೆಯಿರಿ.** **1*3=3**
   - ಸತ್ಯಕ್ಕೆ ಸಾವಿಲ್ಲ; ಸುಳ್ಳಿಗೆ ಸುಖವಿಲ್ಲ.
   - ಗುಣ ನೋಡಿ ಗೆಳೆತನ ಮಾಡು.
   - ದುಡಿಮೆಯೇ ದುಡ್ಡಿನ ತಾಯಿ
48. ನಿಮ್ಮನ್ನು ಕಲಬುರಗಿಯ ಶ್ರೀ ಶರಣಬಸವೇಶ್ವರ ಪ್ರೌಢಶಾಲೆಯ 'ಅಭಿನವ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಸಂವಿಧಾನದ ದಿನಾಚರಣೆ'ಯ ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ವಿಜಯ ವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಮನವಿ ಪತ್ರ ಬರೆಯಿರಿ. **1*5=5**

   **ಅಥವಾ**

   ನಿಮ್ಮನ್ನು ಬಸವಕಲ್ಯಾಣದ ಸರ್ಕಾರಿ ಪ್ರೌಢಶಾಲೆಯ 'ಪ್ರವೀಣ' ಎಂದು ಭಾವಿಸಿಕೊಂಡು, ಧಾರವಾಡ ಕಲ್ಯಾಣನಗರದಲ್ಲಿ ವಾಸವಾಗಿರುವ ತಾಯಿ ಶ್ರೀದೇವಿಯವರಿಗೆ ವಿದ್ಯಾಭ್ಯಾಸದ ಪ್ರಗತಿಯನ್ನು ವಿವರಿಸಿ ಪತ್ರ ಬರೆಯಿರಿ.
49. ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ.

* ಅಂತಾರಾಷ್ಟ್ರೀಯ ಭಾವೈಕ್ಯತೆ. **1*5=5**
* ರೈತರ ಆತ್ಮಹತ್ಯೆಗೆ ಕಾರಣಗಳು ಮತ್ತು ಪರಿಹಾರೋಪಾಯಗಳು
* 'ಬಾಲ್ಯ ವಿವಾಹ' ಒಂದು ಸಾಮಾಜಿಕ ಪಿಡುಗು.